**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ**

**ಸಿ.ಸಿ ನಂಬ್ರಃ 1523/2020**

ಸರ್ಕಾರದ ಪರವಾಗಿ
ಗಂಗೊಳ್ಳಿ ಠಾಣಾ ಪೋಲಿಸರು --- ಪಿರ್ಯಾದಿದಾರರು

ಮೌಲಾನ ಅಸ್ಗರ್ ಅಲಿ, 26 ವರ್ಷ,
ತಂದೆಃ ಮೌಲಾನಾ ಮುಸ್ತಾಕ್ ಅಹಮ್ಮದ್,
ವಾಸಃ ಜಾಮೀಯ ಮಸೀದಿ ಹತ್ತಿರ,
ಗಂಗೊಳ್ಳಿ ಗ್ರಾಮ, ಕುಂದಾಪುರ ತಾಲೂಕು. --- ಆರೋಪಿ

**ಃಆವಾದನೆಃ**

**ಶ್ರೀಮತಿ ಶ್ರುತಿ ಶ್ರೀ ಎಸ್. ಬಿ.ಎ., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ಆವಾದನೆ ಏನೆಂದರೆಃ**

ದಿ. 31.08.2019 ರಂದು ಮಧ್ಯಾಹ್ನ 2.15 ಗಂಟೆಗೆ ಆರೋಪಿತರಾದ ನೀವು ಗುಜ್ಜಾಡಿ ಗ್ರಾಮದ ನಾಯಕವಾಡಿ ರಾಮ ಮಂದಿರದ ಎದುರು ತ್ರಾಸಿ ಗಂಗೊಳ್ಳಿ ಮುಖ್ಯ ರಸ್ತೆಯಲ್ಲಿ ಸಾಕ್ಷಿ2 ನೇಯವರು ಕೆಎ 20 ಇಎಲ್ 6662 ನೇ ಸ್ಕೂಟರನಲ್ಲಿ ಸಹ ಸವಾರರಾಗಿ ನರಸಿಂಹ ಎಂಬವರನ್ನು ಕುಳ್ಳಿರಿಸಿಕೊಂಡು ಗಂಗೊಳ್ಳಿ ಕಡೆಗ ಹೋಗುತ್ತಿದ್ದಾಗ ಎದುರು ಕೆಎ 20 ವಿ 7484 ಮೋಟಾರ್ ಸೈಕಲನ್ನು ಮೊಹಮ್ಮದ್ ತಾರೀಕ್ ಎಂ.ಹೆಚ್. ಎಂಬವರು ಸವಾರಿ ಮಾಡಿಕೊಂಡು ಗಂಗೊಳ್ಳಿ ಕಡೆಗ ರಸ್ತೆಯ ಪೂರ್ವಭಾಗದಲ್ಲಿ ಹೋಗುತ್ತಿರುವಾಗ ಗಂಗೊಳ್ಳಿ ಕಡೆಯಿಂದ ಕೆಎ 20 ಪಿ 8643 ನೇ ಮಾರುತಿ ಸ್ವೀಫ್ಟ ಕಾರನ್ನು ಆರೋಪಿತರಾದ ನೀವು ಅತಿವೇಗ ಹಾಗೂ ಅಜಾಗರೂಕತೆಯಿಂದ ಮಾನವ ಜೀವಕ್ಕೆ ಅಪಾಯವುಂಟಾಗುವ ಚಾಲನೆ ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 279 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ಈ ಮೇಲೆ ತಿಳಿಸಿದ ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ರಸ್ತೆಯ ತೀರಾ ಬಲಭಾಗಕ್ಕೆ ಚಲಾಯಿಸಿ, ನೇರ ಮೋಟಾರು ಸೈಕಲಿಗೆ ಮತ್ತು ಸ್ಕೂಟರಿಗೆ ಡಿಕ್ಕಿ ಹೊಡೆದ ಪರಿಣಾಮ ಸಾಕ್ಷಿ2 ನೇಯವರ ಬಲಕಣ್ಣಿಗೆ ಗಂಭೀರ ಸ್ವರೂಪದ ಗಾಯಗೊಳ್ಳಲು ಕಾರಣರಾಗಿರುವಿರೆಂದೂ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 338 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ಈ ಮೇಲೆ ತಿಳಿಸಿದ ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ಅಪಘಾತ ಪಡಿಸಿದ ಪರಿಣಾಮ ಮೋಟಾರು ಸೈಕಲಿನಲ್ಲಿದ್ದ ಮೊಹಮ್ಮದ್ ತಾರೀಖ್ ಎಂ.ಹೆಚ್. ರವರು ತಲೆಗೆ ಗಂಭೀರ ಸ್ವರೂಪದ ಗಾಯಗೊಂಡು ಚಿಕಿತ್ಸೆಯ ಬಗ್ಗೆ ಕುಂದಾಪುರ ಸರಕಾರಿ ಆಸ್ಪತ್ರೆಗೆ ಸಾಗಿಸುವ ದಾರಿ ಮಧ್ಯದಲ್ಲಿ ಮೃತಪಟ್ಟಿದ್ದು, ಸ್ಕೂಟರ್ ನಲ್ಲಿ ಸಹಸವಾರರಗಿದ್ದ ನರಸಿಂಹ ಎಂಬವರು ಉಡುಪಿಯ ಆದರ್ಶ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದವರನ್ನು ದಿ. 25.09.2019 ರಂದು ಉಡುಪಿ ಜಿಲ್ಲಾ ಸರಕಾರಿ ಆಸ್ಪತ್ರೆಗೆ

ದಾಹಲಾಗಿದ್ದವರು ಚಿಕಿತ್ಸೆಯಲ್ಲಿರುತ್ತಾ, ರಾತ್ರಿ 10.15 ಗಂಟೆಗೆ ಮೃತಪಟ್ಟಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 304 (ಎ)ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿನಾಂಕ :26.11.2024

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಕುಂದಾಪುರ

**ಸಿ.ಸಿ. ಸಂಖ್ಯೆ :1523/2020**

ಫಿರ್ಯಾದುದಾರರು : ಸರಕಾರದ ಪರವಾಗಿ ಗಂಗೊಳ್ಳಿ ಠಾಣಾ ಪೋಲಿಸರು,

**- ವಿರುದ್ಧ-**

ಆರೋಪಿ : ಮೌಲಾನ ಅಸ್ಗರ್ ಅಲಿ, ತಂದೆಃ ಮೌಲಾನಾ ಮುಸ್ತಾಕ್ ಅಹಮ್ಮದ್,

1. ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯ ಸಾರಾಂಶವನ್ನು ಅರ್ಥಮಾಡಿಕೊಂಡಿರಾ?

ಉ.

2. ಅಪರಾಧವನ್ನು ಒಪ್ಪಿ ಕೊಳ್ಳುವಿರಾ ಅಥವಾ ನಿಮ್ಮ ಪರ ಪ್ರತಿರಕ್ಷೆ ಇದೆಯಾ.?

ಉ.

ಮೇಲ್ಕಂಡ ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢಿಕರಿಸುತ್ತೇನೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಕುಂದಾಪುರ.